**ದಿನಾಂಕಃ 09.12.2024 ರಂದು ಸಾಕ್ಷಿದಾರರು ಹಾಜರಿದ್ದು ಸಾಕ್ಷಿಗೆ ಸತ್ಯ ಪ್ರತಿಜ್ಞೆ ಮಾಡಿಸಲಾಯಿತು.**

**ಮುಂದುವರಿದ ಪಾಟೀ–ಸವಾಲುಃ ಪ್ರತಿವಾದಿ ಪರ ಶ್ರೀ ಎಸ್.ಜೆ. ವಕೀಲರಿಂದಃ–**

ನಿಡಿ–1 ರಿಂದ 3 ರಲ್ಲಿ ಕಾಣುತ್ತಿರುವ ಪ್ರತಿವಾದಿಗಳ ಮನೆಗಳು ಇ–ಖಾತಾ ಆಗಿರುತ್ತವೆ ಎಂದರೆ ನನಗೆ ಗೊತ್ತಿಲ್ಲ. ನಿಡಿ–3 ರಲ್ಲಿ ಕಾಣುತ್ತಿರುವ ಮನೆಗಳು ರಾ.ಹೆದ್ದಾರಿಗೆ ಹೊಂದಿಕೊಂಡಂತೆ ಇರುತ್ತವೆ ಎಂದರೆ ಸರಿಯಲ್ಲ, ಮಧ್ಯದಲ್ಲಿ ನನ್ನ ಜಾಗ ಇರುತ್ತದೆ. ಸದರಿ ಮನೆಗಳ ಮುಂಭಾಗ ಸರ್ವೀಸ್ ರಸ್ತೆ ಬರುತ್ತದೆ ಎಂದರೆ ಸರಿಯಲ್ಲ. ಪ್ರತಿವಾದಿಗಳ ಮನೆಯ ಪೂರ್ವ ದಿಕ್ಕಿಗೆ ನಮ್ಮ ನಿವೇಶನ ಬರುತ್ತದೆ ಎಂದು ದಾವೆಯಲ್ಲಿ ಹೇಳಿರುತ್ತೇನೆ. ರಂಗನಾಥಶೆಟ್ಟಿಯವರಿಂದ ಕೊಂಡುಕೊಂಡಿರುತ್ತೇನೆ ಎನ್ನುವ ಜಾಗ ಅಸ್ತಿತ್ವದಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ. ಈಗಲೂ ಸಹ ನಿವೇಶನ 125 ಅಡಿ ಇರುತ್ತದೆಯೇ ಎಂದರೆ ಸಾಕ್ಷಿಯು 35 ಅಡಿ ರಸ್ತೆಯ ಗಡಿಗೆ ಹೋಗಿರುತ್ತದೆ ಎಂದು ಹೇಳುತ್ತಾರೆ. ದಾವೆಯಲ್ಲಿ 35 ಅಡಿ ಜಾಗ ರಸ್ತೆಯ ಗಡಿಗೆ ಹೋಗಿರುತ್ತದೆ ಎಂದು ಹೇಳಿದ್ದು ಅದಕ್ಕೆ ಸಂಬಂಧಿಸಿ ನ್ಯಾಯಾಲಯಕ್ಕೆ ದಾಖಲೆಗಳನ್ನು ನೀಡಿರುತ್ತೇನೆ. ನಿಪಿ–2 ಮತ್ತು 3 ಕ್ಕೆ ಯಾವುದೇ ರೀತಿಯ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿದ ದಾಖಲೆಗಳು ದಾವಾ ಆಸ್ತಿಗೆ ಸಂಬಂಧಿಸಿದ ದಾಖಲೆಗಳು ಅಲ್ಲ ಎಂದರೆ ಸರಿಯಲ್ಲ.

1 ನೇ ಪ್ರತಿವಾದಿಗೆ ಯರಬಳ್ಳಿ ಮಂಡಲ ಪಂಚಾಯಿತಿಯಲ್ಲಿ ದಿನಾಂಕಃ04.02.1992 ರಂದು ಅವರು ಮನೆ ಕಟ್ಟಿರುವ ಜಾಗಕ್ಕೆ ಹಕ್ಕುಪತ್ರ ನೀಡಿರುತ್ತಾರೆ ಎಂದರೆ ಸರಿಯಲ್ಲ. ಪ್ರತಿವಾದಿಯ ಮನೆ ಗ್ರಾಮ ಠಾಣಾದಲ್ಲಿಯೇ ಇರುತ್ತದೆ ಎಂದರೆ ಸರಿಯಲ್ಲ. ನನ್ನ ನಿವೇಶನ ಗ್ರಾಮ ಠಾಣಾದಲ್ಲಿ ಇರುತ್ತದೆ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲಾತಿಗಳನ್ನು ನೀಡಿರುತ್ತೇನೆ. ಪ್ರತಿವಾದಿ ತಮಗೆ ಮಂಜೂರಾದ ಜಾಗದಲ್ಲಿ ರಾಜೀವ್ ಗಾಂಧಿ ಗ್ರಾಮೀಣ ವಸತಿ ಆಶ್ರಯ ಯೋಜನೆಯ ಅಡಿಯಲ್ಲಿ ಮನೆ ಕಟ್ಟಿರುತ್ತಾರೆ ಎಂದರೆ ಸರಿಯಲ್ಲ. ಅಸ್ತಿತ್ವದಲ್ಲಿ ಇಲ್ಲದ ನಿವೇಶನಕ್ಕೆ ನಾನು ಮಾಲೀಕನೆಂದು ಸುಳ್ಳು

ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ದಾವಾ ಆಸ್ತಿಯಲ್ಲಿ ನಾನು ಯಾವತ್ತೂ ಸ್ವಾಧೀನದಲ್ಲಿ ಇರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯರಿಗೆ ತೊಂದರೆ ಕೊಡಲು ಸುಳ್ಳು ದಾವೆ ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಮುಕ್ತ ಹೇಳಿಕೆ ಮತ್ತು ನನ್ನ ಉಕ್ತ ಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹಿರಿಯೂರು.